## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಾಜ ಕಲ್ಯಾಣ ಇಲಾಖೆಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗಳಿಗೆ ಶಾಸಕರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡುವ ಬಗ್ಗೆ.

<u>ಓದಲಾಗಿದೆ:</u>

1. ಸರ್ಕಾರದ ಆದೇಶ ಸಂಖ್ಯೆ:ಸಕಇ 22 ಎಸ್‌ಡಿಸಿ 2000, ದಿ:14-10-2003.
2. ಸರ್ಕಾರದ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಎಲ್ 61 ಎಸ್‌ಎಲ್‌ಪಿ 91, ದಿ:19-05-1992.
3. ಸರ್ಕಾರದ ಆದೇಶ ಸಂಖ್ಯೆ:ಸಕಇ 18 ಎಸ್‌ಡಿಸಿ 2001, ದಿ:12-03-2001.
4. ಟಿಪ್ಪಣಿ ಸಂಖ್ಯೆ:ಸಿಎಂ/4538/ಎಸ್‌ಎಪಿ/2008, ದಿ:25-11-2008.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳು ಜಾರಿಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳನ್ನು ಹಾಗೂ ಜಮೀನುಗಳನ್ನು ಗುರುತಿಸುವ ಸಲುವಾಗಿ ಸಮಿತಿಯನ್ನು ಈ ಕೆಳಕಂಡಂತೆ ಪುನರ್‌ರಚಿಸಲಾಗಿದೆ.

| | | |
|---|---|---|
| 1 | ವಿಧಾನ ಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3 | ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿ | ಸದಸ್ಯರು |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ಪಂಚಾಯತ್ | ಸದಸ್ಯರು |
| 5 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 7 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 8 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 9 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |

10 28/01/09

| | | |
|---|---|---|
| 10 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿಕಾ ಇಲಾಖೆ | ಸದಸ್ಯರು |
| 11 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 12 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 13 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ.<br>ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು.<br>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | ಸದಸ್ಯ ಕಾರ್ಯದರ್ಶಿ |

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಈ ಕೆಳಕಂಡಂತೆ ಸಮಿತಿ ರಚಿಸಿದೆ.

| | | |
|---|---|---|
| 1 | ಸಮಾಜ ಕಲ್ಯಾಣ ಸಚಿವರು | ಅಧ್ಯಕ್ಷರು |
| 2 | ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ | ಸದಸ್ಯರು |
| 3 | ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ | ಸದಸ್ಯರು |
| 4 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ. | ಸದಸ್ಯ ಕಾರ್ಯದರ್ಶಿ |

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ಈ ಕೆಳಕಂಡಂತೆ ಸಮಿತಿ ರಚಿಸಿದೆ.

| | | |
|---|---|---|
| 1 | ಸಮಾಜ ಕಲ್ಯಾಣ ಸಚಿವರು | ಅಧ್ಯಕ್ಷರು |
| 2 | ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ | ಸದಸ್ಯರು |
| 3 | ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, | ಸದಸ್ಯರು |
| 4 | ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ. | ಸದಸ್ಯರು |
| 5 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ. | ಸದಸ್ಯ ಕಾರ್ಯದರ್ಶಿ |

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗಳಿಗೆ ಶಾಸಕರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸೂಚಿಸಿದ್ದು, ಅಂತೆಯೇ ಈ ಕೆಳಕಂಡ ನಿಗಮಗಳಲ್ಲಿ ಕ್ಷೇತ್ರಾವಾರು,

→

ತಾಲ್ಲೂಕುವಾರು, ಜಿಲ್ಲಾವಾರು ಸಮಿತಿಗಳನ್ನು ನೇಮಕ ಮಾಡಿ ಸಮಿತಿಗಳಿಗೆ ಶಾಸಕರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಬೇಕಿರುತ್ತದೆ. ಕಾರಣ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 221 ಬಿಸಿಎ 2008,**
**ಬೆಂಗಳೂರು, ದಿನಾಂಕ:02-01-2009.**

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ಪುನರ್‌ರಚಿಸಲಾಗಿದೆ.

| | | |
|---|---|---|
| 1 | ವಿಧಾನ ಸಭಾ ಕ್ಷೇತ್ರದ ಶಾಸಕರು. | ಅಧ್ಯಕ್ಷರು |
| 2 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3 | ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿ | ಸದಸ್ಯರು |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ಪಂಚಾಯತ್ | ಸದಸ್ಯರು |
| 5 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 7 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 8 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 9 | ತಾಲ್ಲೂಕಿನ ಸಹಾಯಕ ನಿರ್ದೇಶಕರು,ಕೃಷಿ ಇಲಾಖೆ | ಸದಸ್ಯರು |
| 10 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿಕಾ ಇಲಾಖೆ | ಸದಸ್ಯರು |
| 11 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 12 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 13 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ. ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ | ಸದಸ್ಯ ಕಾರ್ಯದರ್ಶಿ |

| | | |
|---|---|---|
| | ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | |

ಈ ಸಮಿತಿಯು ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸುವುದು.

1. ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡುವುದು.
2. ಈ ಕಾರ್ಯಕ್ರಮವು ಯಶಸ್ವಿಯಾಗಿ ಕಾರ್ಯಗತವಾಗಲು ಸಲಹೆ ನೀಡುವುದು.
3. ಯೋಜನೆಯಲ್ಲಿ ಲೋಪದೋಷಗಳು ಕಂಡುಬಂದರೆ ಅಂತಹುಗಳನ್ನು ನಿವಾರಿಸಲು ಸಲಹೆ ನೀಡುವುದು.
4. ಗುಣಮಟ್ಟದ ಸಲಕರಣೆಗಳನ್ನು ಅಳವಡಿಸಲು ಸಲಹೆ ನೀಡುವುದು.
5. ಫಲಾನುಭವಿಗಳು ಇದರ ಪೂರ್ಣ ಲಾಭ ಪಡೆಯಲು ಅವರಿಗೆ ಅಗತ್ಯ ಪ್ರೇರೇಪಣೆ ನೀಡುವುದು.
6. ಫಲಾನುಭವಿಗಳಿಗೆ ಯೋಜನೆಯ ಪೂರ್ಣಲಾಭ ಪಡೆಯಲು ಬೇರೆ ಇಲಾಖೆಯಿಂದ ನೆರವು ಅಥವಾ ಸಹಾಯ ಅಗತ್ಯವಾದಲ್ಲಿ ಅಂತಹ ಸಹಾಯ ಮತ್ತು ನೆರವನ್ನು ಸಂಬಂಧಿಸಿದ ಇಲಾಖೆಗಳಿಂದ ಒದಗಿಸಿಕೊಡಲು ಸಲಹೆ ನೀಡುವುದು.
7. ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ರೈತರ ಬಗ್ಗೆ ವಿವರಗಳನ್ನು ಪಟ್ಟಿ ಮಾಡಿ ನಿರ್ವಹಿಸುವುದು.
8. ಈ ಸಮಿತಿಯ ಸಲಹೆಗಳನ್ನು ಘಟಕದ ಆರ್ಥಿಕ ನೀತಿಗೆ ಒಳಪಟ್ಟು ಅಧಿಕಾರಿಗಳು ಪರಿಶೀಲಿಸಿ ಪರಿಪಾಲನೆ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಸುಬ್ಬಯ್ಯ) 2/1/09
ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಗಳು:

1. ಮಹಾಲೇಖಪಾಲಕರು (ಲೆಕ್ಕಪತ್ರ 1 & 2) ಕರ್ನಾಟಕ, ಬೆಂಗಳೂರು.
2. ಅಪರ ಮುಖ್ಯಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಎಲ್ಲಾ ಸದಸ್ಯರುಗಳಿಗೆ.

ಕರ್ನಾಟಕ ಸರ್ಕಾರ

ಸಂಖ್ಯೆ:ಸಕಇ 253 ಬಿಸಿಎ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು,ದಿನಾಂಕ:09-11-2009.

## ಸೇರ್ಪಡೆ ಆದೇಶ

ಸರ್ಕಾರದ ಆದೇಶ ಸಂಖ್ಯೆ:ಸಕಇ 221 ಬಿಸಿಎ 2009 ದಿನಾಂಕ:02-01-2009 ಆದೇಶಕ್ಕೆ ವಿಧಾನ ಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಗೆ ಈ ಕೆಳಕಂಡ ಅಧಿಕಾರಿಗಳನ್ನು ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯಲ್ಲಿ ಸದಸ್ಯರನ್ನಾಗಿ ಸೇರ್ಪಡೆಗೊಳಿಸಲಾಗಿದೆ.

1) ಲೀಡ್ ಬ್ಯಾಂಕ್ ಆಫೀಸರ್/ಪ್ರತಿನಿಧಿ
2) ಸಹಕಾರ ಸಂಘಗಳ ಸಹಾಯಕ ನಿಬಂಧಕರು
3) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು.

ಉಳಿದಂತೆ ದಿನಾಂಕ:02-01-2009ರ ಸರ್ಕಾರಿ ಆದೇಶದಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

GM (ನಿಗಮ)
D.M.
10/11

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟಿ)
ಸರ್ಕಾರದ ಅಧೀನ ಕಾರ್ಯದರ್ಶಿ-III
ಸಮಾಜ ಕಲ್ಯಾಣ ಇಲಾಖೆ.
09/11

11.XI.2009

ಇವರಿಗೆ:

(1) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು.
(2) ಮಹಾಲೇಖಪಾಲರು (ಲೆಕ್ಕಪತ್ರ 1&2) ಕರ್ನಾಟಕ, ಬೆಂಗಳೂರು.
(3) ಅಪರ ಮುಖ್ಯಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.